**All India Radio: Bangalore**
**National Bulletin In Kannada**
**30.04.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**30.04.2025 1.10 p.m.**
*****************

ಮುಖ್ಯಾಂಶಗಳು

೧. ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಸಂಪುಟ ಸಭೆ

೨. ಇಂದು ಬಸವ ಜಯಂತಿ ಹಾಗೂ ಅಕ್ಷಯ ತೃತೀಯ; ಪ್ರಧಾನಿ ಸೇರಿದಂತೆ ಗಣ್ಯರಿಂದ ಶುಭಾಶಯ

೩. ಭಯೋತ್ಪಾದನೆ ವಿರುದ್ಧ ಕೇಂದ್ರ ಸರ್ಕಾರವನ್ನು ಬೆಂಬಲಿಸುವಂತೆ ರಾಜಕೀಯ ಪಕ್ಷಗಳಿಗೆ ಬಿಎಸ್‌ಪಿ ಮುಖ್ಯಸ್ಥೆ ಮಾಯಾವತಿ ಮನವಿ

೪. ಕೋಲ್ಕತ್ತಾ ಅಗ್ನಿ ಅವಘಡದಲ್ಲಿ ೧೪ ಮಂದಿ ಸಾವು, ಆಂಧ್ರಪ್ರದೇಶದಲ್ಲಿ ಗೋಡೆ ಕುಸಿದು ೭ ಮಂದಿ ದುರ್ಮರಣ; ರಾಷ್ಟ್ರಪತಿ, ಪ್ರಧಾನಿ ಸಂತಾಪ

೫. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಚೆನ್ನೈ ಸೂಪರ್ ಕಿಂಗ್ಸ್ - ಪಂಜಾಬ್ ಕಿಂಗ್ಸ್ ಮುಖಾಮುಖಿ

*****************

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿ ಕೇಂದ್ರ ಸಚಿವ ಸಂಪುಟ ಸಭೆ ನಡೆಯುತ್ತಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಇದು ಮೊದಲ ಕೇಂದ್ರ ಸಚಿವ ಸಂಪುಟ ಸಭೆಯಾಗಿದೆ. ಭದ್ರತೆ ಕುರಿತ ಸಂಪುಟ ಸಮಿತಿಯ ಸಭೆಯೂ ಇಂದು ನಡೆಯುವ ಸಾಧ್ಯತೆಯಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸೇರಿದಂತೆ ಪ್ರಮುಖ ಸಚಿವರು ಸಭೆಯಲ್ಲಿ ಪಾಲ್ಗೊಂಡಿದ್ದಾರೆ.

****************

ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ-ವೇವ್ಸ್ ನಾಳೆ ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಪ್ರಾರಂಭವಾಗಲಿದೆ. ನಾಲ್ಕು ದಿನಗಳ ಕಾಲ ನಡೆಯಲಿರುವ ಈ ಶೃಂಗಸಭೆಯು, ಶ್ರವಣ-ದೃಶ್ಯ ಮತ್ತು ಮನರಂಜನಾ ಉದ್ಯಮದ ಭವಿಷ್ಯದ ಕುರಿತು ಚರ್ಚೆಗಳಿಗೆ ಜಾಗತಿಕ ವೇದಿಕೆಯನ್ನು ಒದಗಿಸಲಿದೆ.

ಜಾಗತಿಕ ಮಾಧ್ಯಮ ಸಂವಾದಗಳು, ಖರೀದಿದಾರರು ಮತ್ತು ಮಾರಾಟಗಾರರ ನಡುವಿನ ಭೇಟಿಗಳು, ಉದಯೋನ್ಮುಖ ಪ್ರತಿಭೆಗಳ ಮತ್ತು ಹೊಸ ತಲೆಮಾರಿನ ಕಥನ ಶೈಲಿಗಳ ಪ್ರದರ್ಶನಗಳಿಗೆ ವೇದಿಕೆಯಾಗಿ ಶೃಂಗಸಭೆ ಕಾರ್ಯನಿರ್ವಹಿಸಲಿದೆ.

ವೇವ್ಸ್ ಶೃಂಗಸಭೆಯು, ಭಾರತದ ಮನರಂಜನೆ ಮತ್ತು ಸೃಜನಶೀಲತೆಯ ಅಗಾಧ ಸಾಮರ್ಥ್ಯವನ್ನು ಜಗತ್ತಿಗೆ ಪ್ರದರ್ಶಿಸಲು ಗಮನಾರ್ಹ ಅವಕಾಶವನ್ನು ಒದಗಿಸುತ್ತದೆ ಎಂದು ಆಕಾಶವಾಣಿ ವರದಿಗಾರರು ವರದಿ ಮಾಡಿದ್ದಾರೆ.

ನಾಳೆಯಿಂದ ಪ್ರಾರಂಭವಾಗುವ ನಾಲ್ಕು ದಿನಗಳ ಈ ಕಾರ್ಯಕ್ರಮವು, ವಿಶ್ವದ ಉನ್ನತ ಮಾಧ್ಯಮ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಪ್ರಮುಖ ಮನರಂಜನಾ ರಾಯಭಾರಿ ಮತ್ತು ಜಗತ್ತಿನಾದ್ಯಂತದ ಸೃಜನಶೀಲರನ್ನು ಒಟ್ಟುಗೂಡಿಸುತ್ತದೆ.

ನೂರು ದೇಶಗಳಿಂದ ಸುಮಾರು ಐದು ಸಾವಿರ ಪ್ರತಿನಿಧಿಗಳು ಶೃಂಗಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಮನರಂಜನಾ ನವೋದ್ಯಮಗಳು ತಮ್ಮ ಆಲೋಚನೆಗಳನ್ನು ಜಾಗತಿಕ ಪ್ರೇಕ್ಷಕರಿಗೆ ಪ್ರಸ್ತುತಪಡಿಸಲು ಮತ್ತು ಹೂಡಿಕೆದಾರರು ಮತ್ತು ಉದ್ಯಮದ ನಾಯಕರೊಂದಿಗೆ ಸಂಪರ್ಕ ಸಾಧಿಸಲು ಅವಕಾಶವನ್ನು ಒದಗಿಸುತ್ತದೆ.

ಚಲನಚಿತ್ರರಂಗದ ಪ್ರಸಿದ್ಧ ನಟರಾದ ಅಮಿತಾಬ್ ಬಚ್ಚನ್, ರಜನಿಕಾಂತ್, ಚಿರಂಜೀವಿ, ಮೋಹನ್ ಲಾಲ್, ನಾಗಾರ್ಜುನ, ಶಾರುಖ್ ಖಾನ್, ಅನಿಲ್ ಕಪೂರ್, ಅಕ್ಷಯ್ ಕುಮಾರ್ ಮತ್ತು ಅಮೀರ್ ಖಾನ್ ಸೇರಿದಂತೆ ಹಲವು ಕಲಾವಿದರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

*****************

ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ಇಂದು. ಹನ್ನೆರಡನೆಯ ಶತಮಾನದ ಸಮಾಜ ಸುಧಾರಕ, ತತ್ವಶಾಸ್ತ್ರಜ್ಞ, ಅನುಭವ ಮಂಟಪದ ಮೂಲಕ ಸಮಾನತೆ ಹಾಗೂ ವಚನಗಳ ಮೂಲಕ ಅರಿವಿನ ಬೆಳಕನ್ನು ಮೂಡಿಸಿದ ಮಹಾನುಭಾವ ಬಸವೇಶ್ವರರು.

ನಾಡಿನೆಲ್ಲೆಡೆ ಬಸವಣ್ಣನವರ ಹಿರಿಮೆಯನ್ನು ಸಾರುವ ಹಲವು ಕಾರ್ಯಕ್ರಮಗಳು ಆಯೋಜಿತವಾಗಿವೆ. ವಚನ ಸಾಹಿತ್ಯವು ಸಾಮಾಜಿಕ, ಧಾರ್ಮಿಕ, ಮನೋ ವೈಜ್ಞಾನಿಕ ಮೌಲ್ಯಗಳನ್ನು ಹೊಂದಿದ್ದು, ಕನ್ನಡ ಸಾಹಿತ್ಯ ಪ್ರಪಂಚಕ್ಕೆ ಹೊಸ ಅಸ್ಮಿತೆಯನ್ನು ದೊರಕಿಸಿಕೊಟ್ಟಿವೆ.

ಬಸವ ಜಯಂತಿ ಹಿನ್ನಲೆ ಪ್ರಧಾನಿ ನರೇಂದ್ರ ಮೋದಿ, ಜಗದ್ಗುರು ಬಸವೇಶ್ವರರ ಆಳವಾದ ಜ್ಞಾನವನ್ನು ಸ್ಮರಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಪ್ರಧಾನಿ, ಸಮಾಜದ ಬಗ್ಗೆ ಬಸವಣ್ಣನವರ ದೃಷ್ಟಿಕೋನ ಮತ್ತು ನಿರ್ಲಕ್ಷ್ಯಕ್ಕೆ ಒಳಗಾದವರನ್ನು ಮೇಲಕ್ಕೆತ್ತಲು ಅವರ ಅವಿಶ್ರಾಂತ ಪ್ರಯತ್ನಗಳು ಜನರಿಗೆ ಮಾರ್ಗದರ್ಶನ ನೀಡುತ್ತಲೇ ಇವೆ ಎಂದು ಹೇಳಿದ್ದಾರೆ.

ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ್, ಕಿರಣ್ ರಿಜಿಜು, ಪ್ರಹ್ಲಾದ್ ಜೋಶಿ, ಶೋಭಾ ಕರಂದ್ಲಾಜೆ ಮತ್ತು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಇತರರು ಸಂಸತ್ ಭವನದ ಸಂಕೀರ್ಣದಲ್ಲಿ ಗುರು ಬಸವೇಶ್ವರರಿಗೆ ಪುಷ್ಪ ನಮನ ಸಲ್ಲಿಸಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಗುರು ಬಸವೇಶ್ವರರ ಅನುಯಾಯಿಗಳಿಗೆ ಶುಭಾಶಯಗಳನ್ನು ಸಲ್ಲಿಸಿ, ದೇಶದೆಲ್ಲೆಡೆಯಿಂದ ಸಂಸತ್ ಸಂಕೀರ್ಣದಲ್ಲಿರುವ ಬಸವಣ್ಣನವರ ಪ್ರತಿಮೆಯನ್ನು ನೋಡಲು ಸಾರ್ವಜನಿಕರು ಭೇಟಿ ನೀಡಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಬಸವ ಜಯಂತಿ ಹಿನ್ನೆಲೆ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಶುಭಾಶಯ ತಿಳಿಸಿದ್ದಾರೆ. ದೇವರ ಕಲ್ಪನೆಯನ್ನು ಮನುಷ್ಯನ ಶರೀರಕ್ಕೆ ಸ್ಥಳಾಂತರಗೊಳಿಸಿ, ದೇಹವನ್ನೇ ದೇವಾಲಯವನ್ನಾಗಿ ಮಾಡಿದವರು ಬಸವಣ್ಣ. ಮೂಢನಂಬಿಕೆಗಳನ್ನು ತಿರಸ್ಕರಿಸಿದ, ವೃತ್ತಿಯ ತಾರತಮ್ಯಗಳ ಮೇಲಿನಿಂದ ಮನುಷ್ಯನ ಸಾಮಾಜಿಕ ಅಂತಸ್ತನ್ನು ಪರಿಗಣಿಸದೆ ಕಾಯಕವೆಲ್ಲವೂ ಪೂಜ್ಯವೆಂದು ಸಾರಿದವರು ಬಸವಣ್ಣ. ಅಂತಹ ಅರಿವಿನ ಬೆಳಕನ್ನು ನಮ್ಮೆಲ್ಲರಲ್ಲಿಯೂ ಬಸವಣ್ಣ ಮೂಡಿಸಲಿ ಎಂದು ಹಾರೈಸುತ್ತೇನೆ.

*****************

ದೇಶದೆಲ್ಲೆಡೆ ಇಂದು ಅಕ್ಷಯ ತೃತೀಯಾವನ್ನು ಸಡಗರದಿಂದ ಆಚರಿಸುತ್ತಿದ್ದಾರೆ. ವೈಶಾಖ ಮಾಸದ ಶುಕ್ಲ ಪಕ್ಷದ ಮೂರನೇ ದಿನದಂದು ಅಕ್ಷಯ ತೃತೀಯವನ್ನು ಆಚರಿಸಲಾಗುತ್ತದೆ.

ಅಕ್ಷಯ ತೃತೀಯ ಹಬ್ಬದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಶುಭ ಹಾರೈಸಿದ್ದಾರೆ.

ಮಾನವೀಯತೆಗೆ ಸಮರ್ಪಿತವಾದ ಈ ಹಬ್ಬವು ಎಲ್ಲರಿಗೂ ಯಶಸ್ಸು, ಸಮೃದ್ಧಿ ಮತ್ತು ಸಂತೋಷವನ್ನು ತರಲಿ ಎಂದು ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಆಶಿಸಿದ್ದಾರೆ.

ವಿಕಿಸ ಭಾರತವನ್ನು ನಿರ್ಮಿಸುವ ಸಾಮೂಹಿಕ ಸಂಕಲ್ಪದಲ್ಲಿ ಈ ಸಂದರ್ಭವು ನವೀಕೃತ ಶಕ್ತಿಯನ್ನು ಪ್ರೇರೇಪಿಸುತ್ತದೆ ಎಂದು ತಿಳಿಸಿದ್ದಾರೆ.

*****************

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ಎಲ್ಲ ರಾಜಕೀಯ ಪಕ್ಷಗಳು, ಕೇಂದ್ರ ಸರ್ಕಾರವನ್ನು ಬೆಂಬಲಿಸಬೇಕು. ಇಂತಹ ವಿಚಾರದಲ್ಲಿಯೂ ರಾಜಕಾರಣವನ್ನು ಮಾಡಬಾರದು ಎಂದು ಬಹುಜನ ಸಮಾಜ ಪಕ್ಷದ ಮುಖ್ಯಸ್ಥೆ ಮಾಯಾವತಿ ಮನವಿ ಮಾಡಿದ್ದಾರೆ.

ಎಲ್ಲಾ ರಾಜಕೀಯ ಪಕ್ಷಗಳು ಭಿನ್ನಾಭಿಪ್ರಾಯಗಳನ್ನು ಮೀರಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವನ್ನು ಬೆಂಬಲಿಸಲು ಒಗ್ಗಟ್ಟಿನಿಂದ ನಿಲ್ಲಬೇಕೆಂದು ಒತ್ತಾಯಿಸಿದ್ದಾರೆ. ಪೆಹಲ್ಗಾಮ್

ಭಯೋತ್ಪಾದಕ ಕೃತ್ಯದಲ್ಲಿ ೨೬ ಅಮಾಯಕರ ದಾರುಣ ಹತ್ಯೆಯಾಗಿದೆ. ಘಟನೆಯ ನಂತರ ಹೆಚ್ಚುತ್ತಿರುವ ರಾಜಕೀಯ ಘರ್ಷಣೆ ಹಿನ್ನೆಲೆಯ ಮಾಯಾವತಿ ಮನವಿ ಮಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಮಾಯಾವತಿ, "ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ಸರ್ಕಾರ ತೆಗೆದುಕೊಳ್ಳುವ ಪ್ರತಿಯೊಂದು ಹೆಜ್ಜೆಯಲ್ಲೂ ಎಲ್ಲಾ ಪಕ್ಷಗಳು ಒಗ್ಗೂಡಿ ಸರ್ಕಾರವನ್ನು ಬೆಂಬಲಿಸಬೇಕು. ಪೋಸ್ಟರ್‌ಗಳನ್ನು ಹಾಕುವ ಮೂಲಕ ಮತ್ತು ಹೇಳಿಕೆಗಳನ್ನು ನೀಡುವ ಮೂಲಕ ಅದರ ನೆಪದಲ್ಲಿ ರಾಜಕೀಯ ಮಾಡುವುದರಿಂದ ಜನರಲ್ಲಿ ಗೊಂದಲವನ್ನು ಸೃಷ್ಟಿಸುತ್ತಿದ್ದು, ಇದು ದೇಶಕ್ಕೆ ಮಾರಕವಾಗಿದೆ ಎಂದು ತಿಳಿಸಿದ್ದಾರೆ.

*****************

ಪಶ್ಚಿಮ ಬಂಗಾಳದಲ್ಲಿ, ಕೇಂದ್ರ ಕೋಲ್ಕತ್ತಾದ ಫಾಲ್ಪಟ್ಟಿ ಮಚುವಾ ಬಳಿಯ ಹೋಟೆಲ್‌ನಲ್ಲಿ ನಿನ್ನೆ ರಾತ್ರಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಕನಿಷ್ಠ ೧೫ ಜನರು ಮೃತಪಟ್ಟಿದ್ದಾರೆ. ೧೪ ಶವಗಳನ್ನು ಹೊರತೆಗೆಯಲಾಗಿದೆ ಹಾಗೂ ಹಲವರನ್ನು ರಕ್ಷಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿನ್ನೆ ರಾತ್ರಿ ಸಂಭವಿದ ಅಗ್ನಿ ಅವಘಡಕ್ಕೆ ಕಾರಣ ಇನ್ನೂ ತಿಳಿದುಬಂದಿಲ್ಲ. ಘಟನೆಯ ತನಿಖೆಗಾಗಿ ವಿಶೇಷ ತಂಡವನ್ನು ರಚಿಸಲಾಗಿದೆ ಎಂದು ಕೋಲ್ಕತ್ತಾ ಪೊಲೀಸ್ ಆಯುಕ್ತ ಮನೋಜ್ ಕುಮಾರ್ ವರ್ಮಾ ತಿಳಿಸಿದ್ದಾರೆ.

ಕೋಲ್ಕತ್ತಾ ಅವಘಡಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದು, ಗಾಯಗೊಂಡವರು ಶೀಘ್ರವೇ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

ಪ್ರಧಾನಿ, ಮೃತರ ಕುಟುಂಬಳಿಗೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ ಮತ್ತು ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿಗಳ ಪರಿಹಾರವನ್ನು ಘೋಷಿಸಿದ್ದಾರೆ.

*****************

ಆಂಧ್ರಪ್ರದೇಶದಲ್ಲಿ, ವಿಶಾಖಪಟ್ಟಣಂ ಬಳಿಯ ಸಿಂಹಾಚಲಂ ದೇವಸ್ಥಾನದಲ್ಲಿ ಸರತಿ ಸಾಲಿನ ಪಕ್ಕದ ಗೋಡೆ ಕುಸಿದು ಏಳು ಜನರು ಸಾವನ್ನಪ್ಪಿದ್ದು, ಸುಮಾರು ೧೫ ಜನರು ಗಾಯಗೊಂಡಿದ್ದಾರೆ.

ವರದಿಗಳ ಪ್ರಕಾರ, ಇಂದು ಮುಂಜಾನೆ ಸುರಿದ ಭಾರೀ ಮಳೆಯಿಂದಾಗಿ ಟೆಂಟ್ ಬಿದ್ದ ನಂತರ ಗೋಡೆ ಕುಸಿದು ಈ ಅವಘಡ ಸಂಭವಿಸಿದೆ.

ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳು ರಕ್ಷಣಾ ಮತ್ತು ಪರಿಹಾರ ಕ್ರಮಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿವೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಆಂಧ್ರಪ್ರದೇಶದ ಗೃಹ ಸಚಿವರು ಮತ್ತು ಜಿಲ್ಲಾಡಳಿತ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದೆ.

ಸಿಂಹಾಚಲಂನಲ್ಲಿರುವ ಶ್ರೀ ವರಾಹಲಕ್ಷ್ಮಿ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಶುಭ 'ಚಂದನೋತ್ಸವ' ಕಾರ್ಯಕ್ರಮವನ್ನು ವೀಕ್ಷಿಸಲು ಅನೇಕ ಭಕ್ತರು ಸೇರಿದ್ದರು.

ಈ ದುರಂತಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದು, ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದು, ಗಾಯಗೊಂಡವರು ಶೀಘ್ರವೇ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

ಪ್ರಧಾನಿ, ಮೃತರ ಕುಟುಂಬಳಿಗೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ ಮತ್ತು ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿಗಳ ಪರಿಹಾರವನ್ನು ಘೋಷಿಸಿದ್ದಾರೆ ಎಂದು ಪ್ರಧಾನಮಂತ್ರಿಗಳ ಕಚೇರಿ ತಿಳಿಸಿದೆ.

*****************

ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

ನವದೆಹಲಿಯಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ, ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ೧೪ ರನ್‌ಗಳಿಂದ ಪರಾಭವಗೊಳಿಸಿತು.

*********ಮುಕ್ತಾಯ********